## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ವಿ.ಬದಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಮತ್ತು ಶ್ರೀಮತಿ ಎಂ.ಪಿ.ನೀಲಾಂಬಿಕ ಸಹಾಯಕ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಹಾಗೂ ಶ್ರೀ ಶರಣಯ್ಯ ಹಿರೇಮಠ, ಪ್ರ.ದ.ಸ. ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಕಾಯ್ದೆ 7(2)(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತರು ಇವರಿಗೆ ವಹಿಸುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ಸಂ:ಜಿಪಂಕೋ/ಉಖಾಯೋ/ಶಿಕ್ರ/2015-16/2104 ದಿನಾಂಕ 6.7.2015.

------

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ 6.7.2015ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಕುಷ್ಟಗಿ ತಾಲ್ಲೂಕು ಪಂಚಾಯಿತಿಯ ಎಂ.ಜಿ.ಎನ್.ಆರ್.ಇ.ಜಿ.ಎ. ಹಾಗೂ ವಿವಿಧ ಯೋಜನೆಗಳಲ್ಲಿ ಆರ್ಥಿಕ ಅಶಿಸ್ತು ಎಸೆಗಿರುವ ಬಗ್ಗೆ ಮತ್ತು ನಿಯಮಗಳ ಉಲ್ಲಂಘನೆ ಆಗಿರುವ ಬಗ್ಗೆ ವರದಿಯನ್ನು ಸಲ್ಲಿಸಿರುತ್ತಾರೆ. ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟ ಕಛೇರಿಗಳಲ್ಲಿ ನಿರ್ವಹಿಸಬೇಕಾದ ವಹಿಗಳನ್ನು ಸಮರ್ಪಕವಾಗಿ ನಿರ್ವಹಿಸಿಲ್ಲವೆಂದು ಕಾಮಗಾರಿಗಳ ಆರಂಭ ಪ್ರಗತಿ ಮತ್ತು ಮುಕ್ತಾಯಕ್ಕೆ ಸಂಬಂಧಿಸಿದಂತೆ ಛಾಯಾ ಚಿತ್ರಗಳನ್ನು ನಿರ್ವಹಿಸದೇ ಕೇವಲ ಮುಕ್ತಾಯದ ಛಾಯಾ ಚಿತ್ರಗಳನ್ನು ಮಾತ್ರ ನಿರ್ವಹಣೆ ಮಾಡಲಾಗಿದೆ ಎಂದೂ ಕೆ.ಟಿ.ಪಿ.ಪಿ ಕಾಯ್ದೆ ಮತ್ತು ನಿಯಮಗಳ ಉಲ್ಲಂಘನೆ ಮಾಡಿ ದರಪಟ್ಟಿ ಕರೆದಿರುವುದು ಹಾಗೂ ಲೆಕ್ಕಪತ್ರ ನಿರ್ವಹಣೆ ಮಾಡದೆ ಒಟ್ಟಾರೆ ತೀವ್ರ ಸ್ವರೂಪದ ಆರ್ಥಿಕ ಅಶಿಸ್ತು ಮತ್ತು ನಿಯಮಗಳ ಉಲ್ಲಂಘನೆಯಾಗಿರುವ ಬಗ್ಗೆ ತಿಳಿಸಿರುತ್ತಾರೆ.

ಮುಂದುವರೆದು, ರಾಜ್ಯ ಗುಣ ನಿಯಂತ್ರಣ ಮಾನಿಟರ್ ಆದ ಶ್ರೀ ಎಂ.ಎನ್. ಶೇಖರಪ್ಪ ಇವರು ಕುಷ್ಟಗಿ ತಾಲ್ಲೂಕು ಪಂಚಾಯಿತಿಯಲ್ಲಿ 2014-15ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಕಾಮಗಾರಿಗಳ ಸ್ಥಳ ಪರಿಶೀಲನೆ ಮಾಡಿ ಸಲ್ಲಿಸಿರುವ ವರದಿಯನುಸಾರ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳು, ಪ್ರಾಯೋಗಿಕ ಸಾಮಗ್ರಿಗಳು, ಪೀಠೋಪಕರಣ ಸಾಮಗ್ರಿಗಳು ಹಾಗೂ ಕುಡಿಯುವ ನೀರು ಶುದ್ಧೀಕರಣ ಘಟಕ ಒದಗಿಸುವುದು ಈ ರೀತಿ ಸಾಮಗ್ರಿಗಳ ಖರೀದಿಗೆ ಸಂಬಂಧಿಸಿದಂತೆ ಒಟ್ಟಾರೆ ರೂ.70,16,868/-ಗಳನ್ನು ಪಾವತಿಸಿದ್ದು, ಈ ಪೈಕಿ ಕೇವಲ ಬಿಳೇಕಲ್ಲು ಮತ್ತು ಕಬ್ಬರಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರೂ. 1,99,552/-ಗಳ ಕ್ರೀಡಾ ಸಾಮಗ್ರಿಗಳು ಮತ್ತು ಪ್ರಯೋಗಾಲಯ ಉಪಕರಣಗಳು ಲಭ್ಯವಾಗಿದ್ದು, ಈ ಬಾಬ್ತಿನಲ್ಲಿ ರೂ.68,17,316/-ಗಳನ್ನು ಹೆಚ್ಚುವರಿ ಪಾವತಿಸಿರುವುದಾಗಿ ವರದಿ ಮಾಡಿರುತ್ತಾರೆ. ಸಾಮಗ್ರಿಗಳ ಖರೀದಿಗೆ ಸಂಬಂಧಿಸಿದಂತೆ ಹಣ ಪಾವತಿಸಿರುವ ಮೊತ್ತಕ್ಕೆ ಸಮನಾಗಿ ಸಾಮಗ್ರಿಗಳನ್ನು ಶಾಲೆಗಳಿಗೆ ವಿತರಿಸಿರುವುದಿಲ್ಲ. ಉಳಿದಂತೆ, ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಅಂದಾಜು ಪಟ್ಟಿ ತಯಾರಿಸದಿರುವುದು, ಕಾಮಗಾರಿ ಅಳತೆಗಳನ್ನು ಅಳತೆ ಪುಸ್ತಕದಲ್ಲಿ ದಾಖಲಿಸದಿರುವುದು ಇತ್ಯಾದಿ ತೀವ್ರ ಸ್ವರೂಪದ ಖರೀದಿ ನಿಯಮಾವಳಿಗಳ ಉಲ್ಲಂಘನೆಯಾಗಿದ್ದು, ಸದರಿ ಗಂಭೀರ ಸ್ವರೂಪದ ಅಕ್ರಮ ಮತ್ತು ಹಣ ದುರುಪಯೋಗಕ್ಕೆ ಈ ಕೆಳಕಂಡ ಅಧಿಕಾರಿ / ನೌಕರರುಗಳು ಜವಾಬ್ದಾರರೆಂದು ತಿಳಿಸಿರುತ್ತಾರೆ.

1) ಶ್ರೀ ಎಂ.ವಿ.ಬದಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ (ಸ್ಥಳ ನಿರೀಕ್ಷಣೆಯಲ್ಲಿರುವ)

2) ಶ್ರೀಮತಿ ಎಂ.ಪಿ.ನೀಲಾಂಬಿಕ ಸಹಾಯಕ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ

3) ಶ್ರೀ ಶರಣಯ್ಯ ಹಿರೇಮಠ, ಪ್ರ.ದ.ಸ. ತಾಲ್ಲೂಕು ಪಂಚಾಯಿತಿ, ಕುಷ್ಟಗಿ

..2..

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರ ದಿನಾಂಕ 6.7.2015ರ ವರದಿ ಹಾಗೂ ರಾಜ್ಯ ಗುಣ ನಿಯಂತ್ರಣ ಮಾನಿಟರ್‌ರವರ ವರದಿಗಳನ್ನು ಪರಿಶೀಲಿಸಲಾಗಿ ಮೇಲೆ ತಿಳಿಸಿರುವ 3 ಅಧಿಕಾರಿ /ನೌಕರರುಗಳು 70 ಲಕ್ಷಗಳಿಗೂ ಹೆಚ್ಚು ಮೊತ್ತದ ಹಣ ಪಾವತಿಸಿದ್ದು ಹಣ ಪಾವತಿಸಿರುವ ಮೊತ್ತಕ್ಕೆ ಸಮನಾಗಿ ಸಾಮಗ್ರಿಗಳನ್ನು ಖರೀದಿಸಿ ಅವುಗಳನ್ನು ಸಂಬಂಧಪಟ್ಟ ಶಾಲೆಗಳಿಗೆ ಒದಗಿಸದೇ ಇರುವುದನ್ನು ಹಾಗೂ ಈ ಸಂಬಂಧ ವಹಿಗಳನ್ನು ನಿರ್ವಹಿಸದೇ ಇರುವುದನ್ನು ಗಮನಿಸಿದಲ್ಲಿ ಸದರಿ ಸಾಮಗ್ರಿಗಳ ಮೊತ್ತವನ್ನು ಮೇಲೆ ತಿಳಿಸಿರುವ ಅಧಿಕಾರಿಗಳು ಶಾಮೀಲಾಗಿ ಹಣ ದುರುಪಯೋಗ ಎಸಗಿರುವುದು ಹಾಗೂ ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ನಿರ್ವಹಿಸಬೇಕಾದ ವಹಿಗಳನ್ನು ನಿರ್ವಹಿಸಿರುವುದಿಲ್ಲವೆಂಬುದು ಕಂಡು ಬಂದಿರುತ್ತದೆ.

ಪ್ರಕರಣದಲ್ಲಿ ಬೃಹತ್ ಪ್ರಮಾಣದ ಆರ್ಥಿಕ ನಷ್ಟ ಮತ್ತು ಗಂಭೀರ ಸ್ವರೂಪದ ಅಕ್ರಮಗಳು ನಡೆದಿರುವುದು ಮೇಲ್ನೋಟಕ್ಕೆ ಕಂಡುಬರುವ ಕಾರಣ 2014-15ನೇ ಸಾಲಿನಲ್ಲಿ ಕುಷ್ಟಗಿ ತಾಲ್ಲೂಕು ಪಂಚಾಯಿತಿಯಲ್ಲಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳ ಕುರಿತಂತೆ ವಿವರವಾದ ತನಿಖೆಯನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯಿಂದ ನಡೆಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 177 ವಿಸೇಬಿ 2015 ಬೆಂಗಳೂರು ದಿನಾಂಕ: 19.08.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು 2014-15ನೇ ಸಾಲಿನಲ್ಲಿ ಕುಷ್ಟಗಿ ತಾಲ್ಲೂಕು ಪಂಚಾಯಿತಿಯಲ್ಲಿ ಅನುಷ್ಠಾನಗೊಳಿಸಿರುವ ಈ ಕೆಳಕಂಡ ಕಾಮಗಾರಿಗಳ ಅನುಷ್ಠಾನದಲ್ಲಿನ ಅಕ್ರಮ ಬಗ್ಗೆ ವಿವರವಾದ ತನಿಖೆಯನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2)(ಎ)ಗನ್ವಯ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಿ ಆದೇಶಿಸಿದೆ.

1. ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳು, ಪ್ರಾಯೋಗಿಕ ಸಾಮಗ್ರಿಗಳು, ಪೀಠೋಪಕರಣ ಸಾಮಗ್ರಿಗಳನ್ನು ಒದಗಿಸುವ ಬಗ್ಗೆ.
2. ಕುಡಿಯುವ ನೀರು ಶುದ್ಧೀಕರಣ ಘಟಕ ಒದಗಿಸುವುದು.
3. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳನ್ನು ಒದಗಿಸುವುದು ಮತ್ತು ವಾಟರ್ ಫಿಲ್ಟರ್ ಅಳವಡಿಸುವುದು.
4. 13ನೇ ಹಣಕಾಸು ಯೋಜನೆ ಅಡಿಯಲ್ಲಿ ಸೋಲಾರ್ ಲೈಟ್‌ಗಳನ್ನು ಖರೀದಿಸಿ ಅಳವಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ-ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಲೆಕ್ಕಪತ್ರ-1 & 2/ಆಡಿಟ್) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ

6. ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ ಇವರ ಮುಖಾಂತರ)

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
3. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.